## 88. ರೂ.31,676 ಕೋಟಿ ಹೂಡಿಕೆ : ಕೈಗಾರಿಕಾ ಸಚಿವರ ಹೇಳಿಕೆ

ಕೋವಿಡ್ ಲಾಕ್‌ಡೌನ್ ನಿರ್ಬಂಧಗಳ ನಡುವೆಯೂ ರಾಜ್ಯದಲ್ಲಿ ರೂ.31,676 ಕೋಟಿ ಬಂಡವಾಳ ಹೂಡಿಕೆ ಆಗಲಿದೆ ಎಂದು ಕೈಗಾರಿಕಾ ಸಚಿವ ಜಗದೀಶ ಶೆಟ್ಟರ್ ಹೇಳಿದರು. ಇದರಿಂದ 65,459 ಉದ್ಯೋಗಗಳು ಸೃಷ್ಟಿ ಆಗಲಿವೆ ಎಂದು ಅವರು ಕೈಗಾರಿಕಾ ಅಭಿವೃದ್ಧಿಯ ಒಂದು ವರ್ಷಗಳ ಸಾಧನೆ ಕುರಿತ ಪುಸ್ತಕ ಬಿಡುಗಡೆ ಬಳಿಕ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ರಾಜ್ಯದಲ್ಲಿ ಹೂಡಿಕೆದಾರರಿಗೆ ಅನುಕೂಲವಾಗುವಂತೆ ತಂದಿರುವ ಹೊಸ ಕೈಗಾರಿಕಾ ನೀತಿ ಮತ್ತು ಕ್ರಮಗಳಿಂದಾಗಿ ಸಂಕಷ್ಟದ ನಡುವೆಯೂ ಉತ್ತಮ ಪ್ರಮಾಣದಲ್ಲಿ ಬಂಡವಾಳ ಹೂಡಿಕೆ ಆಗುತ್ತಿದೆ. ಸೂಕ್ಷ್ಮ, ಸಣ್ಣ, ಮಧ್ಯಮ ಹಾಗೂ ಬೃಹತ್ ಕೈಗಾರಿಕೆಗಳ ಸ್ಥಾಪನೆಗೆ ಕರ್ನಾಟಕ ರಾಜ್ಯ ಕೈಗಾರಿಕಾ ಸೌಲಭ್ಯಗಳ ಅಧಿನಿಯಮ 2020 ಜಾರಿಗೊಳಿಸಿದ ಮೊದಲ ರಾಜ್ಯ ನಮ್ಮದು. ಕರ್ನಾಟಕ ರಾಜ್ಯ ಭೂಸುಧಾರಣಾ ಕಾಯ್ದೆ, ಭೂಪರಿವರ್ತನೆಯ ನಿಯಮಗಳ ಮತ್ತು ಸುಲಲಿತ ವ್ಯವಹಾರದ ಉಪಕ್ರಮಗಳಲ್ಲಿ ಕ್ರಾಂತಿಕಾರಕ ಬದಲಾವಣೆಗಳನ್ನು ತರಲಾಗಿದೆ ಹಾಗೂ ರಾಜ್ಯವನ್ನು ಕೈಗಾರಿಕೆ ಹೂಡಿಕೆದಾರರ ಸ್ನೇಹಿ ರಾಜ್ಯಗಳ ಪಟ್ಟಿಯಲ್ಲಿ ಮೊದಲ ಸ್ಥಾನಕ್ಕೆ ಒಯ್ಯುವ ಗುರಿ ನಮ್ಮದು. 2 ಮತ್ತು 3ನೇ ಹಂತದ ನಗರಗಳಲ್ಲಿ ಕೈಗಾರಿಕೆಗಳನ್ನು ಆಕರ್ಷಿಸುವ ಮೂಲಕ 11 ಕ್ಲಸ್ಟರ್‌ಗಳನ್ನು ಅಭಿವೃದ್ಧಿಪಡಿಸುವ ಜೊತೆಗೆ ರಾಜ್ಯದಲ್ಲಿ ಕೈಗಾರಿಕಾ ಟೌನ್‌ಶಿಪ್‌ಗಳನ್ನು ನಿರ್ಮಿಸಲಾಗುವುದು ಎಂದು ಕೈಗಾರಿಕಾ ಸಚಿವರು ಹೇಳಿದರು.

**ಕೋಲಾರದಲ್ಲಿ ಬೃಹತ್ ಉದ್ದಿಮೆ ಸ್ಥಾಪನೆಗೆ ಆದ್ಯತೆ :** ಕೋಲಾರದ ಬಿಜಿಎಂಎಲ್‌ನಲ್ಲಿ ಬಳಕೆಯಾಗದೇ ಉಳಿದ 3,200 ಎಕರೆ ಭೂಮಿಯನ್ನು ಕೇಂದ್ರ ಕೊಡಲು ಒಪ್ಪಿರುವುದರಿಂದ, ಅಲ್ಲಿ ದೊಡ್ಡ ಪ್ರಮಾಣದ ಉದ್ದಿಮೆಗಳನ್ನು ಸ್ಥಾಪಿಸಲು ಆದ್ಯತೆ ನೀಡಲಾಗುವುದು, ಅಲ್ಲಿ ಖನಿಜಗಳ ಅನ್ವೇಷಣೆಯ ಬಳಿಕ, ಖನಿಜ ಇಲ್ಲದಿರುವುದು ಖಾತರಿ ಆದ ತಕ್ಷಣವೇ ಗಣಿ ಇಲಾಖೆ ಆ ಜಮೀನು ಹಸ್ತಾಂತರಿಸಲು ಒಪ್ಪಿದೆ. ಈ ಜಮೀನು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ 90 ಕಿ.ಮೀ. ಚೆನ್ನೈ ಬಂದರಿನಿಂದ 314 ಕಿ.ಮೀ ಅಂತರದಲ್ಲಿದ್ದು, ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಸೂಕ್ತವಾಗಿದೆ. ಸ್ಥಳೀಯರಿಗೆ ಉದ್ಯೋಗಾವಕಾಶ ಸಿಗುತ್ತದೆ ಎಂದು ಕೈಗಾರಿಕಾ ಸಚಿವರು ತಿಳಿಸಿದರು.

ಆಧಾರ: ಪ್ರಜಾವಾಣಿ, ದಿನಾಂಕ:29.08.2020